ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ(ನಿ), ಬೆಂಗಳೂರು-52
(ಕರ್ನಾಟಕ ಸರ್ಕಾರದ ಉದ್ಯಮ)
ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬಂಡ್ ರಸ್ತೆ ಏರಿಯಾ,
ವಸಂತನಗರ, ಬೆಂಗಳೂರು – 52

ಕ್ರಮಾಂಕ: ದೇಹಿನಿ/ಸ/ಯು.ವ/ಸಿಆರ್-52/2014-15 ದಿನಾಂಕ:03/02/2017

# ಪ್ರಕಟಣೆ

2016-17ನೇ ಸಾಲಿಗೆ ಅತಿ ಹಿಂದುಳಿದ ಮತ್ತು ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾವಂತ ನಿರುದ್ಯೋಗಿ ಯುವಜನರ ಆರ್ಥಿಕ ಸಶಕ್ತಿಕರಣಕ್ಕಾಗಿ ಯುವಶಕ್ತಿ ಸ್ವಸಹಾಯ ಗುಂಪುಗಳಿಗೆ ಸೌಲಭ್ಯ ಒದಗಿಸಲು ಸ್ವಸಹಾಯ ಗುಂಪುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆ:** ಡಾ॥ ನಂಜುಡಪ್ಪ ವರದಿಯಲ್ಲಿ ತಿಳಿಸಿರುವ ಅತ್ಯಂತ ಹಿಂದುಳಿದ ಹಾಗೂ ಅತಿ ಹಿಂದುಳಿದ ತಾಲ್ಲೂಕುಗಳಿಗೆ ಸೇರಿದ ಸ್ವಸಹಾಯ ಗುಂಪಿನ ಸದಸ್ಯರು ಹಿಂದುಳಿದ ವರ್ಗಗಳ ಪ್ರವರ್ಗ- 1, 2ಎ, 3ಎ ಮತ್ತು 3ಬಿ ಗೆ ಸೇರಿದವರಾಗಿರಬೇಕು (ಮತೀಯ ಅಲ್ಪಸಂಖ್ಯಾತರು ಮತ್ತು ವಿಶ್ವಕರ್ಮಸಮುದಾಯಗಳನ್ನು ಹೊರತುಪಡಿಸಿ).

ಅರ್ಜಿದಾರರು/ಗುಂಪಿನ ಸದಸ್ಯರು 18 ರಿಂದ 35 ವಯೋಮಿತಿಯಲ್ಲಿರಬೇಕು. ಅವರ ಕುಟುಂಬದ ವಾರ್ಷಿಕ ವರಮಾನ ರೂ.40000/-ಗಳೊಳಗಿರುವ ಗ್ರಾಮೀಣ ಯುವಸಮುದಾಯ. ಕನಿಷ್ಠ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು.

**ಸಾಲದ ಮೊತ್ತ:** ಸ್ವ ಸಹಾಯ ಗುಂಪಿನ ಪ್ರತಿ ಸದಸ್ಯರಿಗೆ ಗರಿಷ್ಠ ರೂ.35000/-ಗಳವರೆಗೆ ನೆರವು ಇದರಲ್ಲಿ ಶೇ.30 ರಷ್ಟು ಗರಿಷ್ಠ ರೂ.10000/- ಗಳ ಸಹಾಯಧನ ಉಳಿಕೆ ರೂ.25000/-ಗಳು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಸಾಲ.

**ಮರುಪಾವತಿ:** ಈ ಯೋಜನೆಯಲ್ಲಿ ಪಡೆದ ಸಾಲವನ್ನು ಶೇ. 4ರ ಬಡ್ಡಿದರದಲ್ಲಿ 34 ಕಂತುಗಳಲ್ಲಿ ಮರುಪಾವತಿಸಬೇಕು.

ಈ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಇಚ್ಛಿಸುವವರು ನಿಗಮದ ಜಿಲ್ಲಾ ಕಛೇರಿಯಲ್ಲಿ ಸ್ವ ಸಹಾಯ ಸಂಘಗಳಿಗೆ ನಿಗದಿಪಡಿಸಿದ ಅರ್ಜಿ ನಮೂನೆಯನ್ನು ಉಚಿತವಾಗಿ ಪಡೆದು ದಿನಾಂಕ: --/--/------ರೊಳಗೆ ಅಗತ್ಯ ದಾಖಲೆಗಳೊಂದಿಗೆ ನಿಗಮದ ಜಿಲ್ಲಾ ಕಛೇರಿಗೆ ಅರ್ಜಿ ಸಲ್ಲಿಸುವುದು.